## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:-** ಶ್ರೀ ಎಂ.ಆರ್.ಪ್ರಕಾಶ, ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಚಳ್ಳಕೆರೆ ಇವರನ್ನು ಸೇವೆಯಿಂದ ಅಮಾನತ್ತುಗೊಳಿಸುವ ಬಗ್ಗೆ-ಆದೇಶ.

**ಓದಲಾಗಿದೆ:-**
1. ಪೋಲಿಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹ ದಳ, ಚಿತ್ರದುರ್ಗ, ಇವರ ಪತ್ರ ಸಂಖ್ಯೆ: ಎ.ಸಿ.ಬಿ.ಪಿ.ಎಸ್/ಸಿಟಿಎ/ಸಿಆರ್‌ನಂ:01/2016 ದಿನಾಂಕ: 26.09.2016
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಇವರ ಪತ್ರ ಸಂಖ್ಯೆ:ಜಿಪಂ:ಆ(4)ತಾ.ಪಂ./ಸಿಆರ್-327/2016-17, ದಿನಾಂಕ: 27.09.2016.
3. ಅಪರ ಪೋಲಿಸ್ ಮಹಾ ನಿರ್ದೇಶಕರು ಭ್ರಷ್ಟಾಚಾರ ನಿಗ್ರಹದಳ, ಬೆಂಗಳೂರು, ಇವರ ಪತ್ರ ಸಂಖ್ಯೆ: ಎಸಿಬಿ/ಚಿತ್ರದುರ್ಗ/ಮೊ.ಸಂ.01/2016, ದಿನಾಂಕ: 28.10.2016

****

**ಪ್ರಸ್ತಾವನೆ:**

ಮೇಲೆ (2) ರಲ್ಲಿ ಓದಲಾದ ದಿನಾಂಕ: 27.09.2016ರ ಪತ್ರದಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ, ಇವರು ಸರ್ಕಾರಕ್ಕೆ ಸಲ್ಲಿಸಿರುವ ವರದಿಯಲ್ಲಿ, ಚಿತ್ರದುರ್ಗ ಜಿಲ್ಲೆಯ ಚಳ್ಳಕೆರೆ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿಯಾದ ಶ್ರೀ ಎಂ.ಆರ್.ಪ್ರಕಾಶ್, ಮತ್ತು ಶ್ರೀ ಎಸ್.ಬಸವರಾಜು, ಪಂಚಾಯತ್ ಅಭಿವೃದ್ಧಿ ಅಧಿಕಾರಿ, ಗ್ರಾಮ ಪಂಚಾಯತಿ, ದೊಡ್ಡಉಳ್ಳಾರ್ತಿ, ಚಳ್ಳಕೆರೆ ತಾಲ್ಲೂಕು ಇವರುಗಳ ವಿರುದ್ಧ ಶ್ರೀ ಆರ್.ರಾಜು, ಬಿನ್ ರಾಮಣ್ಣ, ಗುತ್ತಿಗೆದಾರರು, ದೊಡ್ಡಉಳ್ಳಾರ್ತಿ ಗ್ರಾಮ ಚಳ್ಳಕೆರೆ ತಾಲ್ಲೂಕು, ಇವರು ದಿನಾಂಕ: 24.09.2016 ರಂದು ಭ್ರಷ್ಟಾಚಾರ ನಿಗ್ರಹ ದಳ, ಚಿತ್ರದುರ್ಗ, ಇಲ್ಲಿ ಸಲ್ಲಿಸಿದ್ದ ದೂರಿನನ್ವಯ, ಚಳ್ಳಕೆರೆ ತಾಲ್ಲೂಕಿನ ದೊಡ್ಡಉಳ್ಳಾರ್ತಿ ವ್ಯಾಪ್ತಿಯಲ್ಲಿ ನಡೆಯುವ ಕಾಮಗಾರಿಗಳ ಹೆಸರು, ವಿವರಗಳನ್ನು ನಮೂದಿಸುವ ಸಲುವಾಗಿ ನಾಮಫಲಕಗಳನ್ನು ಸರಬರಾಜು ಮಾಡಿ ಡಿಲವರಿ ಚಲನ್ ಮೇಲೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿ ರವರು ಸಾಮಗ್ರಿಗಳನ್ನು ಸ್ವೀಕರಿಸಿರುವ ಬಗ್ಗೆ ಸಹಿ ಮಾಡಿ ನೀಡಿದ್ದು, ಒಟ್ಟು 110 ನಾಮಫಲಕಗಳನ್ನು ಸರಬರಾಜು ಮಾಡಿದ್ದು, ಸರಬರಾಜು ಮಾಡಿದ ನಾಮಫಲಕಗಳಿಗೆ ಹಣ ಪಾವತಿಸುವಂತೆ ಸಂಬಂಧಪಟ್ಟ ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿರವರನ್ನು ಕೇಳಲಾಗಿ ಸದರಿಯವರು 55 ನಾಮಫಲಕಗಳ ಹಣವನ್ನು ತಮಗೆ ಹಾಗೂ ಕಾರ್ಯನಿರ್ವಾಹಕ ಅಧಿಕಾರಿಯವರಿಗೆ ನೀಡಿದಲ್ಲಿ ಹಣ ಮಂಜೂರು ಮಾಡಿಸಿಕೊಡುವುದಾಗಿ ತಿಳಿಸಿದ್ದು, ದಿನಾಂಕ: 29-08-2016 ರಂದು

ಕಾರ್ಯನಿರ್ವಾಹಕ ಅಧಿಕಾರಿಯವರನ್ನು ಭೇಟಿ ಮಾಡಲಾಗಿ, ಸದರಿಯವರು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಬಸವರಾಜ್, ಇವರನ್ನು ಭೇಟಿ ಮಾಡಲು ತಿಳಿಸಿದ್ದು, ಅದರಂತೆ ಭೇಟಿ ಮಾಡಲಾಗಿ ಸದರಿಯವರು ರೂ. 15,000/- ಗಳ ಲಂಚದ ಹಣಕ್ಕಾಗಿ ಬೇಡಿಕೆ ಇಟ್ಟಿದ್ದು, ಪಿರ್ಯಾದುದಾರರು ಲಂಚ ನೀಡಲು ಇಷ್ಟವಿಲ್ಲದಿದ್ದ ಕಾರಣ, ಆರೋಪಿತರುಗಳ ವಿರುದ್ಧ ಕಾನೂನು ರೀತಿಯ ಕ್ರಮ ಜರುಗಿಸುವಂತೆ ಪೋಲಿಸ್ ಉಪಾಧೀಕ್ಷಕರು ಭ್ರಷ್ಟಾಚಾರ ನಿಗ್ರಹದಳ ಚಿತ್ರದುರ್ಗ, ಜಿಲ್ಲಾ ಠಾಣೆ, ಇವರಿಗೆ ನೀಡಿದ್ದ ದೂರನ್ನು ಆಧರಿಸಿ, ಭ್ರಷ್ಟಾಚಾರ ನಿಗ್ರಹ ಕಾಯ್ದೆ 1988ರ 7, 13(1)(ಡಿ) ರೆ/ವಿ 13(2) ರನ್ವಯ ಮೊಕದ್ದಮೆ ಸಂಖ್ಯೆ: 01/2016 ರನ್ನು ದಾಖಲಿಸಿಕೊಂಡು, ಶ್ರೀ ಎಂ.ಆರ್.ಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಇವರು ಲಂಚದ ಹಣವನ್ನು ಸ್ವೀಕರಿಸುತ್ತಿದ್ದಾಗ ಬ್ರಷ್ಟಾಚಾರ ನಿಗ್ರಹ ದಳ ಚಿತ್ರದುರ್ಗ, ಇವರಿಂದ ದಿನಾಂಕ: 24.09.2016 ರಂದು ಟ್ರ್ಯಾಪ್ ಆಗಿರುತ್ತಾರೆಂದು ತಿಳಿಸುತ್ತಾ, ಸದರಿ ಅಧಿಕಾರಿಯನ್ನು ದಸ್ತಗಿರಿ ಮಾಡಿ, ದಿನಾಂಕ: 24.09.2016 ರಂದು ಘನ ವಿಶೇಷ ಮತ್ತು ಜಿಲ್ಲಾ ಸತ್ರ ನ್ಯಾಯಾಲಯ, ಚಿತ್ರದುರ್ಗ ಇವರ ಮುಂದೆ ಹಾಜರುಪಡಿಸಲಾಗಿದ್ದು, ಘನ ವಿಶೇಷ ಮತ್ತು ಜಿಲ್ಲಾ ಸತ್ರ ನ್ಯಾಯಾಲಯವು ಆಪಾದಿತರಿಗೆ ದಿನಾಂಕ: 26-09-2016 ರವರೆಗೆ ನ್ಯಾಯಾಂಗ ಬಂಧನಕ್ಕೆ ಒಳಪಡಿಸಿರುತ್ತಾರೆಂದು ಪೋಲಿಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹದಳ, ಚಿತ್ರದುರ್ಗ, ಇವರು ತಮ್ಮ ಕಚೇರಿಗೆ ಮೇಲೆ ಓದಲಾದ (1) ರ ಪತ್ರದಲ್ಲಿ ವರದಿ ಮಾಡಿರುತ್ತಾರೆಂದು ಹಾಗೂ ಸದರಿ ಅಧಿಕಾರಿಯ ವಿರುದ್ಧ ಅಗತ್ಯ ಶಿಸ್ತುಕ್ರಮ ಕೈಗೊಳ್ಳುವಂತೆ ಚಿತ್ರದುರ್ಗ ಜಿಲ್ಲಾ ಪಂಚಾಯತ್‌ನ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿರವರು ಕೋರಿರುತ್ತಾರೆ.

ಚಳ್ಳಕೆರೆ ತಾಲ್ಲೂಕು ಪಂಚಾಯತ್‌ನ ಕಾರ್ಯನಿರ್ವಾಹಕ ಅಧಿಕಾರಿ ಹುದ್ದೆಯಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ಶ್ರೀ ಎಂ.ಆರ್.ಪ್ರಕಾಶ್, ಇವರು ಅಕ್ರಮ ಸಂಭಾವನೆಯನ್ನು ಸ್ವೀಕರಿಸುತ್ತಿದ್ದಾಗ, ದಿನಾಂಕ: 24.09.2016 ರಂದು ದಸ್ತಗಿರಿ ಮಾಡಿ ಮಾನ್ಯ ಜಿಲ್ಲಾ ಸತ್ರ ಮತ್ತು ವಿಶೇಷ ನ್ಯಾಯಾಲಯದ ನ್ಯಾಯಾಧೀಶರು ಚಿತ್ರದುರ್ಗ ಜಿಲ್ಲೆ, ಇವರ ಮುಂದೆ ಹಾಜರುಪಡಿಸಿದ್ದು, ನ್ಯಾಯಾಲಯದ ಆದೇಶದಂತೆ, ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿ, ಆರೋಪಿತರು ದಿನಾಂಕ: 06.10.2016 ರಂದು ನ್ಯಾಯಾಲಯದ ಜಾಮೀನಿನ ಮೇಲೆ ಬಿಡುಗಡೆ ಹೊಂದಿದ್ದು, ಆರೋಪಿತರು 48 ಗಂಟೆಗಳಿಗಿಂತ ಹೆಚ್ಚಿನ ಅವಧಿಗೆ ನ್ಯಾಯಾಂಗ ಬಂಧನದಲ್ಲಿದ್ದುದರಿಂದ, ಹಾಗೂ ಸದರಿಯವರು ಪ್ರಸ್ತುತ ಹುದ್ದೆಯಲ್ಲಿಯೇ ಮುಂದುವರೆದಲ್ಲಿ, ಪ್ರಕರಣದ ತನಿಖೆಗೆ ಅವಶ್ಯವಿರುವ ದಾಖಲಾತಿಗಳನ್ನು ನಾಶಪಡಿಸುವ ಅಥವಾ ತಿರುಚುವ ಸಾಧ್ಯತೆಗಳಿರುವುದರಿಂದ, ಇವರ ವಿರುದ್ಧ ಕರ್ನಾಟಕ ನಾಗರೀಕ

ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮಗಳನ್ವಯ ಸೂಕ್ತ ಕ್ರಮ ಕೈಗೊಳ್ಳುವಂತೆ ಮೇಲೆ (3)ರಲ್ಲಿ ಓದಲಾದ ಪತ್ರದಲ್ಲಿ ಅಪರ ಪೋಲಿಸ್ ಮಹಾನಿರ್ದೇಶಕರು ಭ್ರಷ್ಟಾಚಾರ ನಿಗ್ರಹದಳ ಬೆಂಗಳೂರು, ಇವರು ಕೋರುತ್ತಾ, ಪ್ರಥಮ ವರ್ತಮಾನ ವರದಿ ಹಾಗೂ ಪಿರ್ಯಾದುದಾರರು ನೀಡಿದ್ದ ದೂರಿನ ಪ್ರತಿಯನ್ನು ಒದಗಿಸಿರುತ್ತಾರೆ.

ಭ್ರಷ್ಟಾಚಾರ ನಿಗ್ರಹದಳ ಚಿತ್ರದುರ್ಗ, ಇವರಿಂದ ಟ್ರ್ಯಾಪ್ ಆದ ಶ್ರೀ ಎಂ.ಆರ್.ಪ್ರಕಾಶ್, ಇವರು ಕರ್ನಾಟಕ ಸಾಮಾನ್ಯ ಸೇವೆ (ಸ್ಥಳಿಯ ಆಡಳಿತ ಶಾಖೆ ಅಭಿವೃದ್ಧಿ ಶಾಖೆ)ಯ ವೃಂದ-ಎ(ಕಿರಿಯ ಶ್ರೇಣಿ)ಗೆ ಸೇರಿದ ಅಧಿಕಾರಿಯಾಗಿರುತ್ತಾರೆ.

ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳ ನಿಯಮ 10(2)(ಎ) ರನ್ವಯ ಯಾವುದೇ ಸರ್ಕಾರಿ ನೌಕರರು 48 ಗಂಟೆಗಳಿಗೂ ಮೀರಿದ ಅವಧಿಯಲ್ಲಿ ನ್ಯಾಯಾಂಗ ಬಂಧನದಲ್ಲಿದ್ದರೆ ಅಂತಹ ಅಧಿಕಾರಿ/ನೌಕರರನ್ನು ನ್ಯಾಯಾಂಗ ಬಂಧನದಲ್ಲಿರಿಸಿದ ದಿನಾಂಕದಿಂದ ಅಮಾನತ್ತಿನಲ್ಲಿರಿಸಲಾಗಿದೆಯೆಂದು ಭಾವಿಸತಕ್ಕದೆಂದು (Deemed Suspension) ತಿಳಿಸಲಾಗಿದೆ.

ಶ್ರೀ ಎಂ.ಆರ್.ಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಇವರು ಶ್ರೀ ಆರ್.ರಾಜು, ಬಿನ್ ರಾಮಣ್ಣ, ಗುತ್ತಿಗೆದಾರರು, ದೊಡ್ಡಉಳ್ಳಾರ್ತಿ ಗ್ರಾಮ ಚಳ್ಳಕೆರೆ ತಾಲ್ಲೂಕು, ಇವರಿಂದ ಲಂಚದ ಹಣ ರೂ. 20,000/-ಗಳನ್ನು ಸ್ವೀಕರಿಸುತ್ತಿದ್ದಾಗ, ಭ್ರಷ್ಟಾಚಾರ ನಿಗ್ರಹದಳ ಚಿತ್ರದುರ್ಗ, ಇವರಿಂದ ಟ್ರ್ಯಾಪ್ ಆಗಿರುವ ಹಿನ್ನೆಲೆಯಲ್ಲಿ ಶ್ರೀ ಎಂ.ಆರ್.ಪ್ರಕಾಶ್, ಇವರನ್ನು ದಿನಾಂಕ: 24.09.2016 ರಿಂದ ನ್ಯಾಯಾಂಗ ಬಂಧನದಲ್ಲಿರಿಸಿ, ದಿನಾಂಕ: 06.10.2016 ರಂದು ನ್ಯಾಯಾಲಯ ಜಾಮೀನಿನ ಮೇಲೆ ಬಿಡುಗಡೆ ಹೊಂದಿರುವುದು, ಪೋಲಿಸ್ ಉಪಾಧೀಕ್ಷಕರು ಭ್ರಷ್ಟಾಚಾರ ನಿಗ್ರಹ ದಳ, ಪೋಲಿಸ್ ಠಾಣೆ, ಚಿತ್ರದುರ್ಗ, ಇವರ ಪತ್ರ ದಿನಾಂಕ: 26.09.2016ರ ಪತ್ರದಿಂದ ಕಂಡು ಬರುತ್ತದೆ. ಸದರಿ ಅಧಿಕಾರಿಯು ತಮ್ಮ ಕಾರ್ಯನಿರ್ವಹಣೆಯಲ್ಲಿ ಸಂಪೂರ್ಣ ನಿಷ್ಠೆಯನ್ನು ತೋರದೆ ತೀವ್ರತರವಾದ ಕರ್ತವ್ಯಲೋಪವೆಸಗಿ, ಸರ್ಕಾರಿ ನೌಕರರಿಗೆ ತರವಲ್ಲದ ರೀತಿಯಲ್ಲಿ ವರ್ತಿಸಿರುವುದು ಮೇಲ್ನೋಟಕ್ಕೆ ಕಂಡುಬಂದಿರುವುದರಿಂದ, ಸದರಿಯವರನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 10(1)(ಎ) ರನ್ವಯ ಅಮಾನತ್ತುಗೊಳಿಸಲು ಸರ್ಕಾರವು ತೀರ್ಮಾನಿಸಿ ಈ ಕೆಳಕಂಡಂತೆ ಆದೇಶಿಸಲಾಗಿದೆ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 192 ವಿಸೇಬಿ 2016 ಬೆಂಗಳೂರು ದಿನಾಂಕ: 23-11-2016**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಎಂ.ಆರ್.ಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಇವರ ವಿರುದ್ದ ಭ್ರಷ್ಟಾಚಾರ ನಿಗ್ರಹದಳ ಚಿತ್ರದುರ್ಗ, ಇಲ್ಲಿನ ಕಚೇರಿಯಲ್ಲಿ ದಾಖಲಾಗಿರುವ ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 01/2016 ಸಂಬಂಧಿಸಿದಂತೆ, ಸದರಿಯವರು ನ್ಯಾಯಾಂಗ ಬಂಧನದಲ್ಲಿ ಕಳೆದ ದಿನಾಂಕ: 24.09.2016 ರಿಂದ 06.10.2016ರ ವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 10(2)(ಎ) ರನ್ವಯ ಅಮಾನತ್ತಿನಲ್ಲಿ ಕಳೆದ ಅವಧಿಯೆಂದು (Deemed Suspension) ಪರಿಭಾವಿಸಿ ಆದೇಶಿಸಿದೆ.

ಶ್ರೀ ಎಂ.ಆರ್.ಪ್ರಕಾಶ್, ಕಾರ್ಯನಿರ್ವಾಹಕ ಅಧಿಕಾರಿ ತಾಲ್ಲೂಕು ಪಂಚಾಯತ್ ಚಳ್ಳಕೆರೆ, ಇವರು ಸರ್ಕಾರಿ ನೌಕರರಾಗಿ ತಮ್ಮ ಕರ್ತವ್ಯದಲ್ಲಿ ಪರಿಪೂರ್ಣ ನಿಷ್ಠೆ ಮತ್ತು ಪ್ರಾಮಾಣಿಕತೆ ಪ್ರದರ್ಶಿಸದೆ ಅಕ್ರಮ ಸಂಭಾವನೆ ಸ್ವೀಕರಿಸಿ ಅಪರಾಧಿಕ ದುರ್ನಡತೆ ಎಸಗಿರುವ ಕಾರಣ ಸದರಿಯವರನ್ನು ತಕ್ಷಣದಿಂದ ಜಾರಿಗೆ ಬರುವಂತೆ, ಕರ್ನಾಟಕ ನಾಗರೀಕ ಸೇವಾ (ವನಿಮೇ) ನಿಯಮಾವಳಿಗಳು 1957ರ ನಿಯಮ 10(1)(ಎ) ರನ್ವಯ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಿದೆ.

ಅಮಾನತ್ತಿನ ಅವಧಿಯಲ್ಲಿ ಸದರಿ ಅಧಿಕಾರಿಯು ಸಕ್ರಮ ಪ್ರಾಧಿಕಾರದ ಅನುಮತಿ ಇಲ್ಲದೆ ಕೇಂದ್ರ ಸ್ಥಾನವನ್ನು ಬಿಡತಕ್ಕದ್ದಲ್ಲ ಹಾಗೂ ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ 98ರನುಸಾರ ಜೀವನಾಧಾರ ಭತ್ಯೆಗೆ ಅರ್ಹರಿರುತ್ತಾರೆ.

ಸದರಿ ಅಧಿಕಾರಿಯ ಹುದ್ದೆಯ ಸ್ಥಾನ (ಲೀನ್)ವನ್ನು ಸಹಾಯಕ ಕಾರ್ಯದರ್ಶಿ(ಆಡಳಿತ) ಜಿಲ್ಲಾ ಪಂಚಾಯತ್ ಹಾವೇರಿ ಇಲ್ಲಿಗೆ ವರ್ಗಾಯಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ ಮತ್ತು
ಅವರ ಹೆಸರಿನಲ್ಲಿ

23/11/2016

(ಎಸ್.ರಂಗನಗೌಡ)
ಸರ್ಕಾರದ ಅಧೀನ ಕಾರ್ಯದರ್ಶಿ(ಸೇವೆಗಳು-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಇವರಿಗೆ,

1. ಮಹಾಲೇಖಪಾಲರು, ಕರ್ನಾಟಕ ಬೆಂಗಳೂರು.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಚಿತ್ರದುರ್ಗ.

3. ಅಪರ ಪೋಲಿಸ್ ಮಹಾನಿರ್ದೇಶಕರು, ಭ್ರಷ್ಟಾಚಾರ ನಿಗ್ರಹದಳ, ನಂ.49, ಖನಿಜ ಭವನ ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.
4. ಪೋಲಿಸ್ ಉಪಾಧೀಕ್ಷಕರು, ಭ್ರಷ್ಟಾಚಾರ ನಿಗ್ರಹದಳ ಪೋಲಿಸ್ ಠಾಣೆ, ನಂ. 07, ಪಿಡಬ್ಲ್ಯೂಡಿ ಕ್ವಾಟ್ರಸ್ ವಿ.ಪಿ.ಬಡಾವಣೆ ಚಿತ್ರದುರ್ಗ,
5. ಸಂಬಂಧಿಸಿದ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಜಿಲ್ಲಾ ಪಂಚಾಯತ್ ಚಿತ್ರದುರ್ಗ, ಇವರ ಮುಖಾಂತರ)

ಪ್ರತಿ ಮಾಹಿತಿಗಾಗಿ:

1. ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
2. ಸರ್ಕಾರದ ಪ್ರಧಾನ ಕಾರ್ಯದರ್ಶಿ/ಪ್ರಧಾನ ಕಾರ್ಯದರ್ಶಿ(ಪಂ.ರಾಜ್)/ಜಂಟಿಕಾರ್ಯದರ್ಶಿ (ಆಡಳಿತ) ರವರ ಆಪ್ತ ಶಾಖೆ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
3. ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.
4. ಶಾಖಾ ರಕ್ಷಾ ಕಡತ / ಹೆಚ್ಚುವರಿ ಪ್ರತಿಗಳು.